## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2013-14 ರಿಂದ 2016-17ನೇ ಸಾಲಿನವರೆವಿಗೂ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಜಿಲ್ಲಾ ಪಂಚಾಯಿತಿ ಸಂಪನ್ಮೂಲ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012, ದಿನಾಂಕ: 26.02.2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012 (ಪಿ-3), ದಿನಾಂಕ:18-07-2014.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014 (ಪಿ-2), ದಿನಾಂಕ:27-11-2014.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ದಿನಾಂಕ:04-09-2015.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2016, ದಿನಾಂಕ:18-05-2016.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ದಿನಾಂಕ:05-06-2017.
7. ಮುಖ್ಯ ಅಭಿಯಂತರರು (ಉತ್ತರ) ವ್ಯವಸ್ಥಾಪಕ ನಿರ್ದೇಶಕರ ಪರವಾಗಿ ಕೆ.ಆರ್.ಐ.ಡಿ.ಎಲ್ ಬೆಂಗಳೂರು ಇವರ ಪತ್ರ ಸಂಖ್ಯೆ: ಕೆ.ಆರ್.ಐ.ಡಿ.ಎಲ್/ ಕಾಮಗಾರಿ/ಜಿಪಂಸಂಕೇಂದ್ರ/ವಾ-7/ 2017-18, ದಿನಾಂಕ:23-08-2017.

**ಪ್ರಸ್ತಾವನೆ:**

2013-14 ರಿಂದ 2016-17ನೇ ಸಾಲಿನವರೆವಿಗೂ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರ ಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು ಸ್ಥಾಪಿಸಲು ಮೇಲೆ ಓದಲಾದ (1) (2) (3) (4) (5) ಮತ್ತು (6)ರ ಆದೇಶಗಳ ಮೂಲಕ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಸದರಿ ಯೋಜನೆಯಡಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಹೊಸ ಕಟ್ಟಡ ನಿರ್ಮಿಸಲು ಕಾಮಗಾರಿ ಅಂದಾಜು ಪಟ್ಟಿಯನ್ನು ರೂ.150.00 ಲಕ್ಷಗಳಿಗೆ ತಯಾರಿಸಿ ಆಡಳಿತ್ಮಾಕ ಅನುಮೋದನೆ ನೀಡಲು ಕೋರಿ ಮೇಲೆ ಓದಲಾದ (7)ರ ಪತ್ರದಲ್ಲಿ ಕೋರಿರುವ ಪ್ರಸ್ತಾವನೆಯ ಹಿನ್ನೆಲೆಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುತ್ತದೆ.

| ಕ್ರಸಂ | ಕಾಮಗಾರಿಗಳ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಕೊಪ್ಪಳ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣ | 150.00 |

ಅದಕ್ಕಾಗಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 241 ಜಿಪಸ 2014, ಬೆಂಗಳೂರು, ದಿನಾಂಕ:06-10-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿ, 2013-14 ರಿಂದ 2016-17ನೇ ಸಾಲಿನವರೆವಿಗೂ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆ/ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಜಿಲ್ಲಾ ಪಂಚಾಯತಿ ಸಂಪನ್ಮೂಲ ತರಬೇತಿ ಕೇಂದ್ರ ಕಟ್ಟಡವನ್ನು ನಿರ್ಮಿಸಲು ಅಂದಾಜು ಪಟ್ಟಿಗೆ 150.00ಲಕ್ಷಗಳಿಗೆ(ಒಂದು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ಪ್ರತ್ಯೇಕವಾಗಿ ನೀಡಿ ಆದೇಶಿಸಿದೆ.

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಅನುದಾನವು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.

2. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯೊಳಗೆ ಕಟ್ಟಡವನ್ನು ನಿರ್ಮಿಸಬೇಕು.
4. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
5. ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಜಿ.ಎಫ್.ಆರ್.19-ಎ ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಈ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ(ವರ್ಕ್‌ಸಾಫ್ಟ್) ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಹಣ ಪಾವತಿಸುವಾಗ ವರ್ಕ್‌ಸಾಫ್ಟ್ ಮೂಲಕವೇ ಪಾವತಿಸುವುದು.
6. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ಕಾಮಗಾರಿಯನ್ನು ಎಮ್.ಜಿ.ಎನ್.ಆರ್.ಇ.ಜಿ.ಎಸ್ ಯೋಜನೆಯಡಿಯ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆ ಮಾಡಿಸುವುದು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ/1/ಟಿಎಫ್.ಪಿ/2017, ದಿನಾಂಕ:05-04-2017ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M. Sumitra 6/10/17
(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

6.10.17

**ಇವರಿಗೆ:**

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ಸರ್ಕಲ್, ಬೆಂಗಳೂರು.
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
6. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಕೊಪ್ಪಳ
7. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಜಿಲ್ಲಾ ಪಂಚಾಯತಿ, ಕೊಪ್ಪಳ.
8. ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಕೊಪ್ಪಳ.
9. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂ.329, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.